(ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ನಗರಾಭಿವೃದ್ಧಿ ಸಚಿವರು) :

ಅ) ಗೌರವವಾನ್ವಿತ ಉಚ್ಚ ನ್ಯಾಯಾಲಯದಿಂದ ಪ್ರಸ್ತಾವನೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ನಂದಿ ಬೆಟ್ಟದ ಅಭಿವೃದ್ಧಿ

780 ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್ : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಂದಿ ಬೆಟ್ಟವನ್ನು ಅಭಿವೃದ್ಧಿಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು; ಇದುವರೆವಿಗೂ ಎಷ್ಟು ಹಣವನ್ನು ವಿನಿಯೋಗಿಸಲಾಗಿದೆ.

ಶ್ರೀ ಜಿ.ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :

ಅ) ನಂದಿಬೆಟ್ಟ, ಕೆಮ್ಮಣ್ಣುಗುಂಡಿ, ಕೊಡಚಾದ್ರಿ ಮುಂತಾದ ಗಿರಿಧಾಮಗಳ ಅಭಿವೃದ್ಧಿಯನ್ನು 2009–10ನೇ ಸಾಲಿನ ಬಜೆಟ್ ಭಾಷಣದಲ್ಲಿ ಸೇರಿಸಲಾಗಿರುತ್ತದೆ.

ನಂದಿ ಬೆಟ್ಟವನ್ನು ರೂ.103.14 ಲಕ್ಷಗಳ ಅಂದಾಜು ವೆಚ್ಚದಲ್ಲಿ ಸುಂದರ ಗಿರಿಧಾಮವಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ಈ ಯೋಜನೆಯನ್ನು ತೋಟಗಾರಿಕೆ ಇಲಾಖೆಯ ಮೂಲಕ ಜಾರಿಗೊಳಿಸ ಲಾಗುತ್ತಿದ್ದು, ಮೊದಲ ಕಂತಾಗಿ ರೂ.30.00 ಲಕ್ಷಗಳನ್ನು ಬಿಡುಗಡೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.